ಕ್ರೈಸ್ ವತಿಯ ವಸತಿ ಶಾಲೆಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

27 (65) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕ್ರೈಸ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ವಸತಿ ಶಾಲೆಗಳನ್ನು ಯಾವ ಯಾವ ಹೆಸರಿನಲ್ಲಿ ಪ್ರಾರಂಭಿಸಲಾಗಿದೆ ;

(ಇ) ಸ್ವಂತ ಕಟ್ಟಡ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಇದುವರೆವಿಗೆ ನೇಮಕಗೊಂಡಿರುವ ಒಟ್ಟು ಬೋಧಕರ ಸಂಖ್ಯೆ ಎಷ್ಟು ; (ಪ್ರಾಂಶುಪಾಲರು ಮತ್ತು ಸಹ ಶಿಕ್ಷಕರ ಜಿಲ್ಲಾವಾರು ವಿವರ ನೀಡುವುದು)

(ಉ) ಸದರಿ ಶಾಲೆಗಳಲ್ಲಿ ಅಗತ್ಯವಿರುವ ಒಟ್ಟು ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ;

(ಊ) ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು ?